# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 2375 |
| ಮಾನ್ಯ ಸದಸ್ಯರ ಹೆಸರು: | ಡಾ|| ಎಂ.ಜಿ. ಮುಳೆ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ: | 27-03-2026 |
| ಉತ್ತರಿಸುವ ಸಚಿವರು: | ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ ಮೂರು ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿನ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ವತಿಯಿಂದ ಎಷ್ಟು ಹಿಂದುಳಿದ ವರ್ಗಗಳ ಯುವಕರಿಗೆ ಉದ್ಯಮಶೀಲತಾ ತರಬೇತಿ (Entrepreneurship Training) ನೀಡಲಾಗಿದೆ. (ತಾಲ್ಲೂಕುವಾರು ವಿವರ ನೀಡುವುದು) | ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಅನುಷ್ಠಾನಗೊಳಿಸುತ್ತಿರುವ ಸ್ವಾತಂತ್ರ್ಯ ಅಮೃತ ಮಹೋತ್ಸವ ಮುನ್ನಡೆ ತರಬೇತಿ ಯೋಜನೆಯಡಿ ಕಳೆದ ಮೂರು ವರ್ಷಗಳಲ್ಲಿ 2025-26ನೇ ಸಾಲಿನಲ್ಲಿ ಬೀದರ್ ಜಿಲ್ಲೆಯ 01 ವಿದ್ಯಾರ್ಥಿಗೆ ತರಬೇತಿಯನ್ನು ನೀಡಲಾಗಿದೆ. ತಾಲ್ಲೂಕುವಾರು ವಿವರ ಈ ಕೆಳಕಂಡಂತಿದೆ.<br><table><tr><th>ಕ್ರ. ಸಂ</th><th>ತಾಲ್ಲೂಕು ಹೆಸರು</th><th>ವಿದ್ಯಾರ್ಥಿಗಳ ಸಂಖ್ಯೆ</th></tr><tr><td>1</td><td>ಬೀದರ್</td><td>01</td></tr></table> |
| ಆ) | ತರಬೇತಿ ಪಡೆದ ಯುವಕರಲ್ಲಿ ಸ್ವಯಂ ಉದ್ಯೋಗ ಆರಂಭಿಸಲು ಎಷ್ಟು ಮಂದಿಗೆ ಸಾಲ ಮತ್ತು ಸಬ್ಸಿಡಿ (Loan and subsidy) ಮಂಜೂರು ಮಾಡಲಾಗಿದೆ; ಈ ಉದ್ದೇಶಕ್ಕಾಗಿ ಕಳೆದ ಮೂರು ವರ್ಷಗಳಲ್ಲಿ ಬಿಡುಗಡೆಗೊಂಡ ಒಟ್ಟು ಅನುದಾನದ ಮೊತ್ತ ಎಷ್ಟು; (ವರ್ಷವಾರು ಮಾಹಿತಿ ನೀಡುವುದು) | ಹಿಂದುಳಿದ ವರ್ಗಗಳ ವಿದ್ಯಾವಂತ ಯುವ ಜನರಿಗೆ ಕೌಶಲ್ಯಾಭಿವೃದ್ಧಿ ತರಬೇತಿಯನ್ನು ಸರ್ಕಾರದ ಸಂಸ್ಥೆಗಳಾದ ITI, KGTTI, ATDC, GTTC, VTU & ಶ್ರೀಕಾಳಿದಾಸ ಶಿಕ್ಷಣ ಸಮಿತಿ (ರಿ) ಗಳ ಮೂಲಕ ವಿವಿಧ ಅಲ್ಪಾವಧಿ ಕೋರ್ಸ್‌ಗಳಲ್ಲಿ ತರಬೇತಿ ನೀಡಿ ಅವರ ಉದ್ಯೋಗ ಸಾಮರ್ಥ್ಯವನ್ನು ಹಾಗೂ ಸಾಮಾಜಿಕ/ ಆರ್ಥಿಕ ಸ್ಥಿತಿಗತಿಗಳ ಉನ್ನತೀಕರಿಸುವ ನಿಟ್ಟಿನಲ್ಲಿ ಸ್ವಾತಂತ್ರ್ಯ ಅಮೃತ ಮಹೋತ್ಸವದ ಮುನ್ನಡೆ ತರಬೇತಿ ಯೋಜನೆಯನ್ನು ನಿಗಮದಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ತರಬೇತಿ ಪಡೆದ ಯುವಕರಿಗೆ ಸಾಲ ಸೌಲಭ್ಯ ಕಲ್ಪಿಸಲು ಅವಕಾಶವಿರುವುದಿಲ್ಲ. |
| ಇ) | ನಿಗಮದಿಂದ ಸಬ್ಸಿಡಿ ಮಂಜೂರಾದರೂ ಸಹ ಬ್ಯಾಂಕುಗಳು ವಿವಿಧ ತಾಂತ್ರಿಕ ಕಾರಣಗಳನ್ನು ನೀಡಿ ಸಾಲ ನಿರಾಕರಿಸುತ್ತಿರುವ (Bank Loan Rejection) ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಜಿಲ್ಲೆಯಲ್ಲಿನ ಇಂತಹ ಪ್ರಕರಣಗಳ ಸಂಖ್ಯೆ ಎಷ್ಟು; | ಸ್ವಾತಂತ್ರ್ಯ ಅಮೃತ ಮಹೋತ್ಸವದ ಮುನ್ನಡೆ ತರಬೇತಿ ಯೋಜನೆಯಡಿ ತರಬೇತಿ ಪಡೆದ ಅಭ್ಯರ್ಥಿಯು ಸ್ವಯಂ ಉದ್ಯೋಗ ಕೈಗೊಳಲು "**ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆ**"ಯಡಿ ನಿಗಮಕ್ಕೆ ಪ್ರತ್ಯೇಕವಾಗಿ ಅರ್ಜಿ ಸಲ್ಲಿಸಿದ್ದಲ್ಲಿ ಸಾಲ ಸೌಲಭ್ಯ ಒದಗಿಸಲು ನಿಯಮಾನುಸಾರ ಕ್ರಮವಹಿಸಲಾಗುವುದು. |

| | | |
|---|---|---|
| ಈ) | ಇಲಾಖೆಯಿಂದ ತರಬೇತಿ ಪಡೆದ ನಂತರ ವಾಸ್ತವವಾಗಿ ಸ್ವಂತ ಉದ್ಯೋಗ ಅಥವಾ ಉದ್ಯಮ ಆರಂಭಿಸಿದವರ ಶೇಕಡವಾರು ಪ್ರಮಾಣ (Success Rate) ಎಷ್ಟು; ಉದ್ಯಮ ಆರಂಭಿಸಿದವರಿಗೆ ಮಾರುಕಟ್ಟೆ ಸೌಲಭ್ಯ ಪ್ರದರ್ಶನ ಮಾರಾಟ ಮೇಳಗಳಲ್ಲಿ ಭಾಗವಹಿಸುವ ಅವಕಾಶ ಮುಂತಾದ ಬೆಂಬಲ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು: | ನಿಗಮದಿಂದ ತರಬೇತಿ ಪಡೆದ ಅಭ್ಯರ್ಥಿಯು ಸ್ವಯಂ ಉದ್ಯೋಗ ಇನ್ನು ಪ್ರಾರಂಭಿಸಿರುವುದಿಲ್ಲ ಹಾಗೂ ಖಾಸಗಿ ಕಂಪನಿಯಲ್ಲಿ ಉದ್ಯೋಗ ಪಡೆದು ಕಾರ್ಯ ನಿರ್ವಹಿಸುತ್ತಿದ್ದಾರೆ ಮತ್ತು ಉದ್ಯಮ ಆರಂಭಿಸಿದವರಿಗೆ ಮಾರುಕಟ್ಟೆ ಸೌಲಭ್ಯ ಪ್ರದರ್ಶನ ಮಾರಾಟ ಮೇಳಗಳಲ್ಲಿ ಭಾಗವಹಿಸುವ ಅವಕಾಶ ಒದಗಿಸುವ ಕಾರ್ಯಕ್ರಮವು ಯೋಜನೆಯ ವ್ಯಾಪ್ತಿಗೆ ಒಳಪಡುವುದಿಲ್ಲ. |
| ಉ) | ಉದ್ಯಮ ಆರಂಭಿಸಲು ಇಚ್ಛಿಸುವ ಹಿಂದುಳಿದ ವರ್ಗಗಳ ಯುವಕರಿಗೆ ಯೋಜನಾವರದಿ (DPR) ಸಿದ್ಧಪಡಿಸುವುದು ಹಾಗೂ ಕಾನೂನು ಪ್ರಕ್ರಿಯೆಗಳ ಕುರಿತು ಮಾರ್ಗದರ್ಶನ ನೀಡಲು ಜಿಲ್ಲಾ ಮಟ್ಟದಲ್ಲಿ ಪ್ರತ್ಯೇಕ ವಿಶೇಷ ಉದ್ಯಮ ಮಾರ್ಗದರ್ಶನ ಕೇಂದ್ರ (Entrepreneurship Guidance Centre) ಸ್ಥಾಪಿಸಲಾಗಿದೆಯೇ; ಇದ್ದಲ್ಲಿ ಅದರ ಕಾರ್ಯವ್ಯಾಪ್ತಿ ಏನು? | ಅನ್ವಯಿಸುವುದಿಲ್ಲ. |

**ಸಂಖ್ಯೆ: ಹಿಂವಕ 310 ಬಿಎಂಎಸ್ 2026**

**(ಶಿವರಾಜ್ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ,
ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು.